# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 982 |
| 2) | ಸದಸ್ಯರ ಹೆಸರು | : | ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ: | : | 14.03.2025 |
| 4) | ಉತ್ತರಿಸುವವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

<table>
<tr><th>ಕ್ರ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಹೆಜ್ಜಾಲ-ಚಾಮರಾಜನಗರ ರೈಲು ಮಾರ್ಗದ ಯೋಜನೆ ಬಾಕಿ ಉಳಿಯಲು ಕಾರಣಗಳೇನು;</td><td rowspan="4">ಹೆಜ್ಜಾಲ-ಚಾಮರಾಜನಗರ ರೈಲು ಮಾರ್ಗದ ಯೋಜನೆಯನ್ನು ರಾಜ್ಯ ಸರ್ಕಾರದಿಂದ ಕೈಗೆತ್ತಿಕೊಂಡಿರುವುದಿಲ್ಲ.<br><br>ಈ ಯೋಜನೆಯನ್ನು ರೈಲ್ವೆ ಮಂತ್ರಾಲಯ ದೊಂದಿಗೆ ವೆಚ್ಚ ಹಂಚಿಕೆ ಮೂಲಕ ಕೈಗೆತ್ತಿಕೊಳ್ಳಲು ರೈಲ್ವೆ ಇಲಾಖೆಯು ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ. ಪ್ರಸ್ತುತ ಪ್ರಗತಿಯಲ್ಲಿರುವ 9 ನೂತನ ರೈಲು ಮಾರ್ಗ ಯೋಜನೆಗಳನ್ನು ಪೂರ್ಣಗೊಳಿಸಲು ಬಾಕಿ ಇರುವ ಅನುದಾನದ ಮೊತ್ತ ಅಧಿಕವಾಗಿರುವುದರಿಂದ, ಸದರಿ ಯೋಜನೆಗಳನ್ನು ಪೂರ್ಣಗೊಳಿಸಿದ ನಂತರ ಹೆಜ್ಜಾಲ-ಚಾಮರಾಜನಗರ ರೈಲು ಮಾರ್ಗ ಯೋಜನೆಯನ್ನು ಕೈಗೆತ್ತಿಕೊಳ್ಳುವ ಕುರಿತು ಪರಿಶೀಲಿಸಬಹುದಾಗಿದೆ ಎಂದು ಆರ್ಥಿಕ ಇಲಾಖೆಯು ಅಭಿಪ್ರಾಯ ಪಟ್ಟಿರುತ್ತದೆ.</td></tr>
<tr><td>ಆ)</td><td>ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td></tr>
<tr><td>ಇ)</td><td>ಕೇಂದ್ರ ಸರ್ಕಾರದ ಮನವೊಲಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆಯೇ; ಯೋಜನೆ ಅನುಷ್ಠಾನಕ್ಕೆ ಕೈಗೊಂಡ ಕ್ರಮಗಳೇನು;</td></tr>
<tr><td>ಈ)</td><td>ಕಾಲಮಿತಿಯೊಳಗೆ ಯೋಜನೆಯನ್ನು ಕೈಗೆತ್ತಿಕೊಳ್ಳುವ ಉದ್ದೇಶದ ಬಗ್ಗೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಾಗುವುದೇ?</td></tr>
</table>

ಸಂಖ್ಯೆ: ಮೂಅಇ 69 ರಾರಾಹೆ 2025/ಇ

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು